# <u>ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ</u>

## <u>ಸಿ.ಸಿ.345/2024</u>

<u>ಸಾಕ್ಷಿದಾರರ ಹೇಳಿಕೆಃ</u>

| | | |
|---|---|---|
| **ಹೆಸರು** | : | ರೇವಣಸಿದ್ದಪ್ಪ ಹೆಚ್ ಎಂ ಚಾಸಾಃ **1** ಪ್ರಾಸಾಃ **1** |
| **ತಂದೆಯ ಹೆಸರು** | : | ಲೇಟ್ ಇಟಿಗೆಪ್ಪ |
| **ವಯಸ್ಸು** | : | **60** ವರ್ಷ |
| **ವೃತ್ತಿ** | : | ವ್ಯವಸಾಯ |
| **ವಾಸಸ್ಥಳ** | : | ಹೊನ್ನಾಳಿ |

ದಿನಾಂಕಃ **13-03-2026** ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದ:-</u>

ಆರೋಪಿತರು ಗೊತ್ತು. ಆರೋಪಿತರು ನಮ್ಮ ಜೊತೆ ಯಾವುದೇ ಜಗಳ ಮಾಡಿರುವುದಿಲ್ಲ. ಆರೋಪಿತರು ಅಕ್ರಮವಾಗಿ ಗುಂಪುಕಟ್ಟಿಕೊಂಡು ಬಂದು ನನಗೆ ಸೇರಿದ ಲಾರಿಗಳು ರಸ್ತೆಯಲ್ಲಿ ತಿರುಗಾಡದಂತೆ ಅಡ್ಡಿಯನ್ನುಂಟು ಮಾಡಿಲ್ಲ ಮತ್ತು ಅವಾಚ್ಯ ಶಬ್ಧಗಳಿಂದ ಬೈದು ಕೊಲೆ ಬೆದರಿಕೆಯನ್ನು ಹಾಕಿರುವುದಿಲ್ಲ. ಈ ಬಗ್ಗೆ ನಾನು ಪೊಲೀಸರಿಗೆ ಯಾವುದೇ ದೂರನ್ನು ಕೊಟ್ಟಿರುವುದಿಲ್ಲ. ಪೊಲೀಸರ ಕೋರಿಕೆಯ ಮೇರೆಗೆ 1 ದಾಖಲೆಗೆ ಸಹಿಯನ್ನು ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ.

ದೂರನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.

<u>ಪಾಟೀ ಸವಾಲು :- ಮಾನ್ಯ ಸ.ಸ.ಅ. ರವರಿಂದ:-</u>

ದಿಃ 23-03-2024 ರಂದು ಮತ್ತು 24-03-2024 ರಂದು ಆರೋಪಿತರು ಅಕ್ರಮವಾಗಿ ಗುಂಪುಕಟ್ಟಿಕೊಂಡು ಬಂದು ನಾನು ಲಾರಿಗಳ ಮೂಲಕ ಕಲ್ಲು, ಕ್ವಾರ್ರೆಯಿಂದ ಕಲ್ಲುಗಳನ್ನು ತುಗ್ಗೇಹಳ್ಳಿಯಿಂದ ಜೀನಹಳ್ಳಿಗೆ ಬಂಡಿ ದಾರಿಯಲ್ಲಿ ಲಾರಿಗಳ ಮೂಲಕ ಶಿಕಾರಿಪುರ ಮುಖ್ಯ ರಸ್ತೆಗೆ ಸಾಗಾಟ ಮಾಡುತ್ತಿದ್ದಾಗ ಆರೋಪಿತರು ಅಡ್ಡಿಯನ್ನುಂಟು ಮಾಡಿರುತ್ತಾರೆ ಎಂದು ಮತ್ತು ನನಗೆ ಅವಾಚ್ಯ ಶಬ್ಧಗಳಿಂದ ಬೈದು ಕೊಲೆ ಬೆದರಿಕೆಯನ್ನು ಹಾಕಿರುತ್ತಾರೆ ಎಂದು ಪೊಲೀಸರಿಗೆ ನಿಪಿ-1 ರಂತೆ ದೂರನ್ನು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಈಗ ಆರೋಪಿತರೊಂದಿಗೆ ರಾಜಿ ಮಾಡಿಕೊಂಡಿರುತ್ತೇವೆ. ಆ ಕಾರಣದಿಂದ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು :- ಆರೋಪಿತರ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.